**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು-560 027**

ಸಂ:ಕರಾಸಾ:ಕೇಕ:ಸಂ:ಸಿ2:1932: 364 :2023-24

ದಿನಾಂಕ: 30.05.2023

**ಸುತ್ತೋಲೆ: 1754/2023**

ವಿಷಯ: ವಿದ್ಯಾರ್ಥಿ ಉಚಿತ / ರಿಯಾಯಿತಿ ಬಸ್ ಪಾಸ್ ಮಾನ್ಯತೆ ಬಗ್ಗೆ.
ಉಲ್ಲೇಖ: ಸೂಕ್ತಾಧಿಕಾರಿಗಳ ಆದೇಶ ದಿನಾಂಕ: 29.05.2023.

****

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಪ್ರತಿ 2023-24ನೇ ಸಾಲಿನ ವಿದ್ಯಾರ್ಥಿ ಉಚಿತ / ರಿಯಾಯಿತಿ ಬಸ್ ಪಾಸುಗಳನ್ನು ಇಡಿಸಿಎಸ್ ಇಲಾಖೆಯ ಸೇವಾಸಿಂಧು ತಂತ್ರಾಂಶದ ಮುಖಾಂತರ ಸಂಪೂರ್ಣ ಯಾಂತ್ರೀಕೃತವಾಗಿ ವಿತರಣೆ ಮಾಡಲು ಕ್ರಮವಹಿಸಲಾಗುತ್ತಿದ್ದು, ಇಡಿಸಿಎಸ್ ಇಲಾಖೆಯು ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ. ವಿದ್ಯಾರ್ಥಿಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗೆ ಹಾಗೂ ಪಾಸು ಪಡೆಯಲು ಕಾಲಾವಕಾಶ ನೀಡಬೇಕಿರುತ್ತದೆ. ಜೊತೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ತರಗತಿಗಳಿಗೆ ಹಾಜರಾಗಲು ಯಾವುದೇ ಅನಾನುಕೂಲವಾಗದಂತೆ ಕ್ರಮವಹಿಸಬೇಕಿರುತ್ತದೆ.

ಈ ಸಂಬಂಧ ವಿದ್ಯಾರ್ಥಿಗಳಿಗೆ ದಿನಾಂಕ 15.06.2023 ರವರೆಗೆ ಈ ಕೆಳಕಂಡ ದಾಖಲೆಗಳನ್ನು ನಿಗಮದ ಬಸ್ಸುಗಳಲ್ಲಿ ತೋರಿಸಿ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ.

1. ಪ್ರಸಕ್ತ ವರ್ಷದಲ್ಲಿ ಶಾಲಾ / ಕಾಲೇಜುಗಳಿಗೆ ದಾಖಲಾಗಿರುವ ಸಂಬಂಧದ ಶುಲ್ಕ ಪಾವತಿ ರಸೀದಿ ಅಥವಾ
2. 2022-23ನೇ ಸಾಲಿನ ವಿದ್ಯಾರ್ಥಿ ಬಸ್‌ಪಾಸ್

ಈ ಬಗ್ಗೆ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಅಗತ್ಯ ಮಾಹಿತಿ ನೀಡಿ ಕ್ರಮ ತೆಗೆದುಕೊಳ್ಳಲು ಹಾಗೂ ಈ ಸಂಬಂಧ ಅನುಸರಣಾ ವರದಿಯನ್ನು ಕಳುಹಿಸಲು ಸೂಚಿಸಲಾಗಿದೆ.

30/5

ನಿರ್ದೇಶಕರು (ಸಿ ಮತ್ತು ಜಾ)
ಕರಾರಸಾ ನಿಗಮ.

ಪ್ರತಿಯನ್ನು ವಂದನಾಪೂರ್ವಕವಾಗಿ:

- ✓ ವ್ಯವಸ್ಥಾಪಕ ನಿರ್ದೇಶಕರು, ವಾಕರಸಾ ಸಂಸ್ಥೆ / ಕಕರಸಾ ನಿಗಮ, ಹುಬ್ಬಳ್ಳಿ / ಕಲಬುರ್ಗಿ ರವರ ಹಿರಿಯ ಆಪ್ತ ಕಾರ್ಯದರ್ಶಿಗಳು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಸಿ&ಜಾ) ಕ.ರಾ.ರ.ಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಮುಖ್ಯ ಸಂಚಾರ ವ್ಯವಸ್ಥಾಪಕರು, ವಾಕರಸಾ ಸಂಸ್ಥೆ / ಕಕರಸಾ ನಿಗಮ, ಕೇಂದ್ರ ಕಛೇರಿ, ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
- ✓ ಎಲ್ಲಾ ಹಿರಿಯ / ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕರಾರಸಾ ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.